# ಕರ್ನಾಟಕ ಸರ್ಕಾರ

ಸಂಖ್ಯೆ: ಅಇ (ವಿ) 27 ಪಿಇಎನ್ 2007

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹು ಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 06.01.2011.

## ಅಧಿಕೃತ ಜ್ಞಾಪನ

ಸರ್ಕಾರದ ಆದೇಶ ಸಂಖ್ಯೆ:ಅಇ (ವಿ) 27 ಪಿಇಎನ್ 07 ದಿನಾಂಕ: 13.10.2010 ರಲ್ಲಿ ದಿನಾಂಕ: 01.07.1993ಕ್ಕಿಂತ ಮುಂಚಿತವಾಗಿ ನಿವೃತ್ತರಾದವರ ಅಥವಾ ಸೇವೆಯಲ್ಲಿರುವಾಗಲೇ ಮೃತರಾದ ಸರ್ಕಾರಿ ನೌಕರರ ಪ್ರಕರಣಗಳಲ್ಲಿ 80 ರಿಂದ 85, 85 ರಿಂದ 90 ಮತ್ತು 90 ವಯಸ್ಸು ಮೀರಿದವರಿಗೆ, ದಿನಾಂಕ: 01.04.2006 ರಿಂದ ಜಾರಿಗೆ ಬರುವಂತೆ, ಕ್ರಮವಾಗಿ ಅವರ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 20, ಶೇಕಡ 30 ಮತ್ತು 50 ರಷ್ಟು ಪಿಂಚಣಿಯನ್ನು ಪಿಂಚಣಿದಾರ/ಕುಟುಂಬ ಪಿಂಚಣಿದಾರರಿಗೆ ಹೆಚ್ಚಿಸಲು ಸರ್ಕಾರವು ಆದೇಶಿಸಿದ್ದು ಸದರಿ ಪಿಂಚಣಿದಾರರಿಗೆ ಈ ಆದೇಶದನ್ವಯ ಕ್ರಮ ಕೈಗೊಳ್ಳಲು ಸೂಚಿಸಿದೆ.

ಸದರಿ ಆದೇಶದ ಕಂಡಿಕೆ-9 ರಲ್ಲಿ, ಪಿ.ಪಿ.ಓ.ನಲ್ಲಿ ಜನ್ಮ ದಿನಾಂಕವನ್ನು ನಮೂದಿಸದಿದ್ದರೆ ಪಿಂಚಣಿ ಮಂಜೂರಾತಿ ಪ್ರಾಧೀಕಾರವು ಪಿಂಚಣಿದಾರನ/ಕುಟುಂಬ ಪಿಂಚಣಿದಾರನ ಜನ್ಮ ದಿನಾಂಕವನ್ನು ಮತ್ತು ವಯಸ್ಸನ್ನು ಖಚಿತಪಡಿಸಿಕೊಂಡು ಪಿ.ಪಿ.ಓ.ದಲ್ಲಿ ನಮೂದಿಸಿ ಸಂಬಂಧಪಟ್ಟ ಖಜಾನೆ/ಬ್ಯಾಂಕುಗಳಿಗೆ ಅನುಕೂಲವಾಗುವಂತೆ ಹೆಚ್ಚುವರಿ ಪಿಂಚಣಿ/ಕುಟುಂಬ ಪಿಂಚಣಿ ಪಾವತಿ ಬಗ್ಗೆ ಪಿಂಚಣಿ ಪಾವತಿ ಪ್ರಾಧೀಕಾರಕ್ಕೆ ಕಳುಹಿಸತಕ್ಕದ್ದು ಎಂದು ತಿಳಿಸಲಾಗಿದೆ. ಆದರೆ ಇಂತಹ ಪ್ರಕರಣಗಳಲ್ಲಿ ಜನ್ಮ ದಿನಾಂಕ: ಮತ್ತು ವಯಸ್ಸನ್ನು ಯಾವ ಆಧಾರದ ಮೇಲೆ ಖಚಿತಪಡಿಸಿಕೊಳ್ಳಬೇಕೆಂಬ ಬಗ್ಗೆ ಮಹಾಲೇಖಪಾಲರು ಮತ್ತು ಖಜಾನೆ ಇಲಾಖೆಯವರು ಸ್ಪಷ್ಟೀಕರಣವನ್ನು ಕೋರಿರುತ್ತಾರೆ. ಸರ್ಕಾರವು ಇದನ್ನು ಪರಿಶೀಲಿಸಿ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ಸೂಚಿಸಿದೆ.

ಪಿಂಚಣಿದಾರ/ಕುಟುಂಬ ಪಿಂಚಣಿದಾರನ ಜನ್ಮ ದಿನಾಂಕವು ಪಿಂಚಣಿ ಪಾವತಿ ಆದೇಶ (ಪಿ.ಪಿ.ಓ.)ದಲ್ಲಿ ಲಭ್ಯವಿಲ್ಲದಿದ್ದಲ್ಲಿ, ಪಿಂಚಣಿ ಪಾವತಿ ಪ್ರಾಧೀಕಾರವು, ಈ ಬಗ್ಗೆ ಸಂಬಂಧಪಟ್ಟ ಪಿಂಚಣಿದಾರ/ಕುಟುಂಬ ಪಿಂಚಣಿದಾರರಿಗೆ ತಿಳಿಸಿ, ಅವರಿಂದ ಈ ಕೆಳಕಂಡ ಯಾವುದಾದರು ದಾಖಲೆಗಳನ್ನು ಪತ್ರಾಂಕಿತ ಅಧಿಕಾರಿ/ಎಂ.ಎಲ್.ಎ.ರವರಿಂದ ದೃಢೀಕರಿಸಿಕೊಂಡು ಪಡೆಯತಕ್ಕದ್ದು.

1. ಎಸ್.ಎಸ್.ಎಲ್.ಸಿ. ಸರ್ಟಿಫಿಕೇಟ್ (ಹುಟ್ಟಿದ ದಿನಾಂಕ ಒಳಗೊಂಡಂತೆ)
2. ಪ್ಯಾನ್ ಕಾರ್ಡ್
3. ಪಾಸ್ಪೋರ್ಟ್
4. ಡ್ರೈವಿಂಗ್ ಲೈಸೆನ್ಸ್ (ಹುಟ್ಟಿದ ದಿನಾಂಕ ಒಳಗೊಂಡಿದ್ದರೆ)
5. ಎಲೆಕ್ಷನ್ ಐ.ಡಿ.ಕಾರ್ಡ್

ನಂತರ ಸಂಬಂಧಿಸಿದ ದಾಖಲೆಯನ್ನು ಮಹಾಲೇಖಪಾಲರ ಕಛೇರಿಗೆ ಕಳುಹಿಸಿ, ಅವರಿಂದ

ಔಪಚಾರಿಕ ಪ್ರಾಧೀಕರಣವನ್ನು ಪಡೆದು, ದಿನಾಂಕ: 13.10.2010ರ ಆದೇಶದ ಪ್ರಕಾರ ಹೆಚ್ಚುವರಿ ಪಿಂಚಣಿ/ಕುಟುಂಬ ಪಿಂಚಣಿಯನ್ನು ಪಾವತಿಸಲು ಕ್ರಮ ಕೈಗೊಳ್ಳತಕ್ಕದ್ದು.

(ಪದ್ಮಾವತಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ವಿಶ್ರಾಂತಿ ವೇತನ)

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
3. ಇಲಾಖಾ ಮುಖ್ಯಸ್ಥರು,
4. ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು
17. ವಾರಪತ್ರ/ಶಾಖೆಯ ರಕ್ಷಾ ಕಡತ.